# ಗಡಿಕನ್ನಡಿಗ

ಸಂಪಾದಕ:ಮುರುಗೇಶ ಬಿ.ಶಿವಪೂಜಿ

www.gadikannadiga.com

ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ,ಕೊಪ್ಪಳ,ಗದಗ, ವಿಜಯಪುರ, ವಿಜಯನಗರ ಬಳ್ಳಾರಿಗಳಿಂದ ಏಕಕಾಲಕ್ಕೆ ಪ್ರಕಟಿತ

ಸಂಪುಟ:22/ಸಂಚಿಕೆ:105 RNI NO.KAR KAN/2003/10452:No./PMG/KA/NK/BM/743/24-26 ರವಿವಾರ ದಿನಾಂಕ: 17-03-2024 ಪುಟಗಳು: 6 ಬೆಲೆ:1 ರೂ ☎ 9480498694 / Email-mbshivapuji@gmail.com2


## ಲೋಕಸಭೆ ಚುನಾವಣೆ:ಏಪ್ರಿಲ್ 19 ರಿಂದ 7 ಹಂತಗಳಲ್ಲಿ ಚುನಾವಣೆ,ರಾಜ್ಯದಲ್ಲಿ ಏ.26, ಮೇ 7 ರಂದು ಮತದಾನ

ನವದೆಹಲಿ: ಕೇಂದ್ರ ಚುನಾವಣಾ ಆಯೋಗ, ಇಡೀ ದೇಶವೇ ತೀವ್ರ ಕೂತುಹಲದಿಂದ ಕಾಯುತ್ತಿದ್ದ 2024ರ ಲೋಕಸಭೆ ಚುನಾವಣೆಗೆ ಶನಿವಾರ ದಿನಾಂಕ ನಿಗದಿ ಮಾಡಿದ್ದು, ಏಪ್ರಿಲ್ 19 ರಿಂದ ಒಟ್ಟು 7 ಹಂತಗಳಲ್ಲಿ ಚುನಾವಣೆ ನಡೆಯಲಿದೆ ಮತ್ತು ಜೂನ್ 4 ರಂದು ಫಲಿತಾಂಶ ಪ್ರಕಟವಾಗಲಿದೆ.

ಇಂದು ದೆಹಲಿಯ ವಿಜ್ಞಾನಭವನದಲ್ಲಿ ಚುನಾವಣಾ ಆಯುಕ್ತರಾದ ಜ್ಞಾನೇಶ್ ಕುಮಾರ್ ಮತ್ತು ಸುಖಬೀರ್ ಸಿಂಗ್ ಸಂಧು ಅವರೊಂದಿಗೆ ಜಂಟಿ ಸುದ್ದಿಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಮುಖ್ಯ ಚುನಾವಣಾ ಆಯುಕ್ತ ರಾಜೀವ್ ಕುಮಾರ್ ಅವರು, ನಾವು ಭಾರತೀಯ ಪ್ರಜಾಪ್ರಭುತ್ವದ ಅತಿದೊಡ್ಡ ಹಬ್ಬಕ್ಕೆ ಸಂಪೂರ್ಣವಾಗಿ ಸಿದ್ಧರಾಗಿದ್ದೇವೆ ಎಂದು ಹೇಳಿದರು.

ದೇಶದ ಒಟ್ಟು 543 ಲೋಕಸಭಾ ಕ್ಷೇತ್ರಗಳಿಗೆ 7 ಹಂತಗಳಲ್ಲಿ ಲೋಕಸಭೆ ಚುನಾವಣೆ ನಡೆಯಲಿದ್ದು, ಏಪ್ರಿಲ್ 19 ರಂದು ಮೊದಲ ಹಂತದ ಮತದಾನ ನಡೆಯಲಿದೆ. ಜೂನ್ 4ರಂದು ಫಲಿತಾಂಶ ಪ್ರಕಟಗೊಳ್ಳಲಿದೆ ಎಂದು ರಾಜೀವ್ ಕುಮಾರ್ ತಿಳಿಸಿದ್ದಾರೆ.

ಸಾಮಾಜಿಕ ಜಾಲತಾಣದಲ್ಲಿ ಫೇಕ್ ಸುದ್ದಿಗಳ ಮೇಲೂ ತೀವ್ರ ನಿಗಾ ಇಡಲಾಗುವುದು. ಅಭ್ಯರ್ಥಿಗಳನ್ನು ಬಗ್ಗೆ ಮಾತನಾಡಲು ಅವಕಾಶವಿದೆ. ಆದರೆ ಸುಳ್ಳು ಸುದ್ದಿಗಳ ಮೂಲಕ ತೆಗಳಲು ಅವಕಾಶವಿಲ್ಲ ಎಂದು ಹೇಳಿದರು.

ಕರ್ನಾಟಕದಲ್ಲಿ ಎರಡು ಹಂತಗಳಲ್ಲಿ ಚುನಾವಣೆ

ರಾಜ್ಯದ 28 ಲೋಕಸಭಾ ಕ್ಷೇತ್ರಗಳಿಗೆ ಎರಡು ಹಂತದಲ್ಲಿ ಮತದಾನ ನಡೆಯಲಿದೆ. ದಕ್ಷಿಣ ಕರ್ನಾಟಕದಲ್ಲಿ ಮೊದಲ ಹಂತದ ಮತದಾನ ನಡೆಯಲಿದ್ದು, ಉತ್ತರ ಕರ್ನಾಟಕ ಎರಡನೇ ಹಂತದಲ್ಲಿ ಮತದಾನ ನಡೆಯಲಿದೆ ಎಂದು ಮುಖ್ಯ ಚುನಾವಣಾ ಆಯುಕ್ತ ರಾಜೀವ್ ಕುಮಾರ್ ಹೇಳಿದ್ದಾರೆ.

ಏಪ್ರಿಲ್ 26 ರಂದು ರಾಜ್ಯದ ಚಿತ್ರದುರ್ಗ, ಉಡುಪಿ–ಚಿಕ್ಕಮಗಳೂರು, ದಕ್ಷಿಣ ಕನ್ನಡ, ಹಾಸನ, ತುಮಕೂರು, ಚಿಕ್ಕಬಳ್ಳಾಪುರ, ಕೋಲಾರ, ಮಂಡ್ಯ, ಮೈಸೂರು–ಕೊಡಗು, ಚಾಮರಾಜನಗರ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ದಕ್ಷಿಣ, ಬೆಂಗಳೂರು ಉತ್ತರ, ಬೆಂಗಳೂರು ಕೇಂದ್ರದಲ್ಲಿ ಮತದಾನ ನಡೆಯಲಿದೆ.

ಮೇ 7 ರಂದು ಎರಡನೇ ಹಂತದಲ್ಲಿ ಒಟ್ಟು 14 ಜಿಲ್ಲೆಗಳಲ್ಲಿ ಮತದಾನ ನಡೆಯಲಿದೆ. ಬೆಳಗಾವಿ, ಬಳ್ಳಾರಿ, ಚಿಕ್ಕೋಡಿ, ಹಾವೇರಿ–ಗದಗ, ಕಲಬುರಗಿ, ಬೀದರ್?, ಹುಬ್ಬಳ್ಳಿ  ಧಾರವಾಡ, ಕೊಪ್ಪಳ, ರಾಯಚೂರು, ಉತ್ತರ ಕನ್ನಡ, ದಾವಣಗೆರೆ, ಶಿವಮೊಗ್ಗ, ಬಾಗಲಕೋಟೆ, ವಿಜಯಪುರದಲ್ಲಿ ಮೇ 7 ರಂದು ಚುನಾವಣೆ ನಡೆಯಲಿದೆ.

2024 ರ ಲೋಕಸಭೆ ಚುನಾವಣೆ ಜೊತೆಗೆ ಆಂಧ್ರ ಪ್ರದೇಶ, ಸಿಕ್ಕಿಂ, ಅರುಣಾಚಲ ಪ್ರದೇಶ ಹಾಗೂ ಒಡಿಶಾ ರಾಜ್ಯಗಳ ವಿಧಾನಸಭಾ ಚುನಾವಣೆಣಟಿಜಜಜಿಟಿಜಜ ಕೇಂದ್ರ ಚುನಾವಣಾ ಆಯೋಗ ವೇಳಾಪಟ್ಟಿಯನ್ನು ಪ್ರಕಟಿಸಿದೆ. ಅಲ್ಲದೆ ರಾಜ್ಯದ ಸುರಪುರ ವಿಧಾನಸಭಾ ಕ್ಷೇತ್ರಕ್ಕೂ ಉಪ ಚುನಾವಣೆ ಘೋಷಿಸಲಾಗಿದೆ.

ಮೇ 13 ರಂದು ಆಂಧ್ರಪ್ರದೇಶ ಮತ್ತು ಒಡಿಶಾದಲ್ಲಿ ವಿಧಾನಸಭೆ ಚುನಾವಣೆ ನಡೆಯಲಿದೆ. ಏಪ್ರಿಲ್ 19 ರಂದು ಅರುಣಾಚಲ ಪ್ರದೇಶ ಮತ್ತು ಸಿಕ್ಕಿಂ ಚುನಾವಣೆ ನಡೆಯಲಿದ್ದು, ಜೂನ್ 4 ರಂದು ಮತ ಎಣಿಕೆ ನಡೆಯಲಿದೆ.

ದೇಶದಲ್ಲಿ 97 ಕೋಟಿ ನೋಂದಾಯಿತ ಮತದಾರರಿದ್ದಾರೆ. 10.5 ಲಕ್ಷಕ್ಕೂ ಹೆಚ್ಚು ಮತಗಟ್ಟೆಗಳನ್ನು ಸ್ಥಾಪಿಸಲಾಗುವುದು 1.5 ಕೋಟಿ ಸಿಬ್ಬಂದಿ, 55 ಲಕ್ಷ ಇವಿಎಂಗಳಿಂದ ಚುನಾವಣೆ ನಿರ್ವಹಿಸಲ್ಪಡುತ್ತದೆ ಎಂದು ರಾಜೀವ್ ಕುಮಾರ್ ಹೇಳಿದ್ದಾರೆ.

ಮುಕ್ತ ನ್ಯಾಯಸಮ್ಮತ, ಪಾರದರ್ಶಕ ಚುನಾವಣೆ ನಮ್ಮ ಉದ್ದೇಶ. ದೇಶಾದ್ಯಂತ 97 ಕೋಟಿ ಮತದಾರರು ಮತ ಚಲಾಯಿಸಲಿದ್ದಾರೆ 49.7 ಕೋಟಿ ಪುರುಷರು, 47.1 ಕೋಟಿ ಮಹಿಳಾ ಮತದಾರರು ಇದ್ದಾರೆ. 1.8 ಕೋಟಿ ಮತದಾರರಿಂದ ಮೊದಲ ಬಾರಿಗೆ ಮತ ಚಲಾವಣೆ ಮಾಡಲಿದ್ದಾರೆ. 48 ಸಾವಿರ ತೃತೀಯ ಲಿಂಗಿ ಮತದಾರರು ಮತ ಚಲಾಯಿಸಲಿದ್ದಾರೆ. 85 ವರ್ಷ ಮೇಲ್ಪಟ್ಟ 82 ಲಕ್ಷ ಮತದಾರರು ಮತ ಚಲಾಯಿಸಲಿದ್ದಾರೆ. 19.74 ಕೋಟಿ ಯುವ ಮತದಾರರು ಮತ ಚಲಾಯಿಸಲಿದ್ದಾರೆ.ದೇಶದಾದ್ಯಂತ 10.5 ಲಕ್ಷ ಮತಗಟ್ಟೆಗಳ ಸ್ಥಾಪನೆ ಮಾಡಲಾಗಿದೆ.ಮತದಾನಕ್ಕೆ ಒಟ್ಟು 55 ಲಕ್ಷ ವಿದ್ಯುನ್ಮಾನ ಮತಯಂತ್ರಗಳ ಬಳಕೆಯಾಗಲಿದೆ. ಚುನಾವಣಾ ಕರ್ತವ್ಯಕ್ಕಾಗಿ ಒಂದೂವರೆ ಕೋಟಿ ಸಿಬ್ಬಂದಿ ನಿಯೋಜನೆ ಮಾಡಲಾಗಿದೆ ಎಂದು ರಾಜೀವ್ ಕುಮಾರ್ ಮಾಹಿತಿ ನೀಡಿದರು.

ಲೋಕಸಭೆ ಚುನಾವಣೆಯು ಏಪ್ರಿಲ್ 19 ರಿಂದ ಜೂನ್ 1ರವರೆಗೆ ಏಳು ಹಂತಗಳಲ್ಲಿ ನಡೆಯಲಿದೆ. ಅರುಣಾಚಲ ಪ್ರದೇಶ, ಸಿಕ್ಕಿಂ, ಆಂಧ್ರಪ್ರದೇಶ ಮತ್ತು ಒಡಿಶಾ ರಾಜ್ಯಗಳ ವಿಧಾನಸಭಾ ಚುನಾವಣೆಯೂ ಏಕಕಾಲದಲ್ಲಿ ನಡೆಯಲಿದೆ. ಅರುಣಾಚಲ ಪ್ರದೇಶ ಮತ್ತು ಸಿಕ್ಕಿಂನಲ್ಲಿ ಏಪ್ರಿಲ್ 19ರಂದು ಮತ್ತು ಆಂಧ್ರಪ್ರದೇಶದಲ್ಲಿ ಮೇ 13ರಂದು ವಿಧಾನಸಭೆ ಚುನಾವಣೆ ನಡೆಯಲಿದೆ. ಒಡಿಶಾ ವಿಧಾನಸಭೆಗೆ ಮೇ 13, ಮೇ 20, ಮೇ 25 ಮತ್ತು ಜೂನ್ 1ರಂದು ನಾಲ್ಕು ಹಂತಗಳಲ್ಲಿ ಚುನಾವಣೆ ನಡೆಯಲಿದೆ.

ಚುನಾವಣಾ ಆಯೋಗವು ಮಾದರಿ ನೀತಿ ಸಂಹಿತೆ ಉಲ್ಲಂಘಿಸುವ ರಾಜಕೀಯ ಪಕ್ಷಗಳು ಮತ್ತು ಅಭ್ಯರ್ಥಿಗಳ ಕುರಿತಂತೆ ನಿರ್ದಯವಾಗಿ ವರ್ತಿಸುತ್ತದೆ ಎಂದು ಹೇಳಿದೆ. ಅಲ್ಲದೆ ಚುನಾವಣಾ ಪ್ರಚಾರ ನಡೆಸುವ ಎಲ್ಲಾ ಸ್ಟಾರ್ ಪ್ರಚಾರಕರಿಗೆ ಎಂಸಿಸಿ ಮಾರ್ಗಸೂಚಿಗಳನ್ನು ಹಸ್ತಾಂತರಿಸಲು ರಾಜಕೀಯ ಪಕ್ಷಗಳಿಗೆ ಸೂಚಿಸಲಾಗಿದೆ. ಡಿಜಿಟಲ್ ಜಗತ್ತಿನಲ್ಲಿ ಅಭ್ಯರ್ಥಿಗಳು ನೀಡುವ ಎಲ್ಲಾ ಹೇಳಿಕೆಗಳನ್ನು ದಾಖಲಿಸಲಾಗುತ್ತದೆ ಎಂದು ಸಿಇಸಿ ಹೇಳಿದೆ. ಇದೇ ವೇಳೆ ಛಿಗಿಖಲುಖಐ ಅಪ್ಲಿಕೇಶನ್ ಅನ್ನು ಸಹ ಪರಿಚಯಿಸಿತು.

ಇವಿಎಂ ಯಂತ್ರಗಳ ರಿಗ್ಗಿಂಗ್‌ಗೆ ಸಂಬಂಧಿಸಿದ ಕಳವಳಗಳಿಗೆ ಸಿಇಸಿ ರಾಜೀವ್ ಕುಮಾರ್ ಪ್ರತಿಕ್ರಿಯಿಸಿದ್ದಾರೆ. ಇವಿಎಂಗಳು 'ಶೇಕಡ 100ರಷ್ಟು ಸುರಕ್ಷಿತ' ಎಂದು ಸಮರ್ಥಿಸಿಕೊಂಡರು. ಭಾರತದಲ್ಲಿನ ನ್ಯಾಯಾಲಯಗಳು ಇವಿಎಂಗಳ ವಿರುದ್ಧದ ವಿವಿಧ ದೂರುಗಳನ್ನು 40 ಬಾರಿ ಪರಿಶೀಲಿಸಿದ್ದು ಪ್ರತಿ ಬಾರಿ ಎಲ್ಲಾ ಆರೋಪಗಳನ್ನು ತಿರಸ್ಕರಿಸುತ್ತವೆ ಎಂದು ರಾಜೀವ್ ಕುಮಾರ್ ಹೇಳಿದರು.

ಆಯೋಗವು ರಾಜಕೀಯ ಪಕ್ಷಗಳ ನಿಧಿ ಕುರಿತಂತೆ 'ಸಂಪೂರ್ಣ ಪಾರದರ್ಶಕತೆ'ಯ ಪರವಾಗಿದೆ. ಆದರೆ ಪಕ್ಷಗಳಿಗೆ ಕೊಡುಗೆ ನೀಡುವ ಜನರಿಗೆ ಕಿರುಕುಳ ನೀಡಬಾರದು ಎಂದು ಸಿಇಸಿ ಹೇಳಿದೆ. ಸುಪ್ರೀಂ ಕೋರ್ಟ್ ಚುನಾವಣಾ ಬಾಂಡ್‌ಗಳನ್ನು ನಿಷೇಧಿಸಿರುವ ಕುರಿತಂತೆ ಪ್ರತಿಕ್ರಿಯಿಸಿದ ಅವರು, ಪ್ರಜಾಪ್ರಭುತ್ವದಲ್ಲಿ ವಿಷಯಗಳನ್ನು ಮುಚ್ಚಿಡಲು ಜಾಗವಿಲ್ಲ ಎಂದರು.ಚುನಾವಣಾ ಸಂಬಂಧಿತ ನಕಲಿ ಸುದ್ದಿಗಳನ್ನು ಎದುರಿಸಲು ಮಿಥ್ ವರ್ಸಸ್ ರಿಯಾಲಿಟಿ ಎಂಬ ಸತ್ಯ ತಪಾಸಣೆ ವೆಬ್‌ಸೈಟ್ ಅನ್ನು ಇಸಿಐ ಶೀಘ್ರದಲ್ಲೇ ಪ್ರಾರಂಭಿಸಲಿದೆ. ಲೋಕಸಭೆ ಚುನಾವಣೆಗೆ ಭಂಗ ತರುವ, ಸಾರ್ವಜನಿಕ ಸುವ್ಯವಸ್ಥೆಗೆ ಧಕ್ಕೆ ತರುವ, ವಾಸ್ತವಾಂಶಗಳನ್ನು ಆಧರಿಸಿರದ ಮತ್ತು ನಕಲಿ ರೀತಿಯ ನಿರೂಪಣೆಯನ್ನು ಮಾಡಲು ಪ್ರಯತ್ನಿಸುತ್ತಿದ್ದರೆ ನಾವು ಬದಲು ಸಮಸ್ಯೆಯನ್ನು ಪರಿಹರಿಸಲು ಪ್ರಯತ್ನಿಸುತ್ತೇವೆ ಎಂದು ಹೇಳಿದರು.

## ಲೋಕಸಭಾ ಚುನಾವಣೆ–2024 ನೀತಿ ಸಂಹಿತೆ ಜಾರಿ;ನ್ಯಾಯಸಮ್ಮತ ಚುನಾವಣೆಗೆ ಸಕಲ ಸಿದ್ಧತೆ

ಬೆಳಗಾವಿ,ಮಾ.16 – ಲೋಕಸಭಾ ಸಾರ್ವತ್ರಿಕ ಚುನಾವಣೆಗಳಿಗೆ ಭಾರತ ಚುನಾವಣಾ ಆಯೋಗವು ಅಧಿಸೂಚನೆ ಹೊರಡಿಸಿದ್ದು ಜಿಲ್ಲೆಯಲ್ಲಿ ಮುಕ್ತ, ನ್ಯಾಯ ಸಮ್ಮತ ಚುನಾವಣೆ ಜರುಗಿಸಲು ಸಕಲ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಗಳು ಆದ ಜಿಲ್ಲಾಧಿಕಾರಿ ನೀತಿಶ ಪಾಟೀಲ ತಿಳಿಸಿದರು.ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶನಿವಾರ (ಮಾ.16) ನಡೆದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು. ಭಾರತ ಚುನಾವಣಾ ಆಯೋಗವು ಲೋಕಸಭಾ ಸಾರ್ವತ್ರಿಕ ಚುನಾವಣೆಗಳಿಗೆ ಅಧಿಸೂಚನೆ ಹೊರಡಿಸಿದ ಹಿನ್ನಲೆಯಲ್ಲಿ ಜಿಲ್ಲೆಯಲ್ಲಿ ಮಾರ್ಚ್ 16 ರಿಂದ ಮಾದರಿ ನೀತಿ ಸಂಹಿತ ಜಾರಿಗೆ ಬಂದಿರುತ್ತದೆ.ಚುನಾವಣಾ ಅಧಿಸೂಚನೆಯನ್ನು ಏಪ್ರೀಲ್ 12 ರಂದು ಹೊರಡಿಸಲಾಗುತ್ತಿದ್ದು, ಏಪ್ರೀಲ 19 ನಾಮಪತ್ರ ಸಲ್ಲಿಸಲು ಕೊನೆಯ ದಿನವಾಗಿರುತ್ತದೆ.

ಏಪ್ರೀಲ 20 ನಾಮಪತ್ರಗಳ ಪರಿಶೀಲನೆ ನಡೆಯಲಿದ್ದು, ಏಪ್ರೀಲ್ 22 ಉಮೇದುವಾರಿಕೆ ಹಿಂತೆಗೆದು ಕೊಳ್ಳಲು ಕೊನೆಯ ದಿನವಾಗಿರು ತ್ತದೆ. ಮೇ. 7 ರಂದು ಮತದಾನ ಹಾಗೂ ಜೂನ್ 4 ರಂದು ಮತ ಏಣಿಕೆ ಜರುಗಲಿದೆ ಎಂದು ತಿಳಿಸಿ ದರು. ಜಿಲ್ಲೆಯಲ್ಲಿ ಒಟ್ಟು 4062 210 ಮತದಾರರಿದ್ದು ಚಿಕ್ಕೋಡಿ ಲೋಕಸಭ ಮತಕ್ಷೇತ್ರದಲ್ಲಿ 865731 ಮಹಿಳಾ ಮತದಾರರು ಸೇರಿದಂತೆ ಒಟ್ಟು 1741758 ಮತದಾರರು, ಬೆಳಗಾವಿ ಲೋಕ ಸಭಾ ಮತಕ್ಷೇತ್ರದಲ್ಲಿ 955 725 ಮಹಿಳಾ ಮತದಾರರು ಸೇರಿದಂತೆ ಒಟ್ಟು 1904099 ಮತದಾರರಿ ದ್ದು ಖಾನಾಪುರ ಹಾಗೂ ಕಿತ್ತೂರ ಮತಕ್ಷೇತ್ರದಲ್ಲಿ 204848 ಮಹಿಳಾ ಮತದಾರರು ಸೇರಿದಂತೆ ಒಟ್ಟು 416353 ಮತದಾರರಿರುತ್ತಾರೆ.ಜಿಲ್ಲೆಯಲ್ಲಿ ಒಟ್ಟು 4524 ಮತಗಟ್ಟೆಗಳನ್ನು ತೆರೆಯಲಾಗಿದ್ದು ಚಿಕ್ಕೋಡಿ ಮತಕ್ಷೇತ್ರದಲ್ಲಿ ನಗರಪ್ರದೇಶದಲ್ಲಿ 419, ಗ್ರಾಮೀಣ ಪ್ರದೇಶಗಳಲ್ಲಿ 1477ಮತಗಟ್ಟೆಗಳು ಸೇರಿದಂತೆ ಒಟ್ಟು 1896 ಮತಗ ಟ್ಟೆಗಳು, ಬೆಳಗಾವಿ ಲೋಕಸಭಾ ಮತಕ್ಷೇತ್ರದಲ್ಲಿ ಗ್ರಾಮೀಣ ಪ್ರದೇಶದಲ್ಲಿ 814, ನಗರ ಪ್ರದೇಶಗಳಲ್ಲಿ 1272 ಮತಗಟ್ಟೆಗಳು ಸೇರಿದಂತೆ ಒಟ್ಟು 2086 ಮತಗಟ್ಟೆಗಳು, ಖಾನಾಪುರ ಹಾಗೂ ಕಿತ್ತೂರ ಮತಕ್ಷೇತ್ರಗಳಲ್ಲಿ ಒಟ್ಟು 542 ಮತಗಟ್ಟೆ ಗಳನ್ನು ಸ್ಥಾಪಿಸಲಾಗಿರುತ್ತದೆ.

ಒಟ್ಟಾರೆ ಲೋಕಸಭಾ ಸಾರ್ವತ್ರಿಕ ಚುನಾವ ಣೆಯನ್ನು ಶಾಂತ ರೀತಿಯಿಂದ ಮುಕ್ತವಾಗಿ, ನ್ಯಾಯ ಸಮ್ಮತವಾಗಿ ಹಾಗೂ ನಿಷ್ಪಕ್ಷವಾಗಿ ಜರುಗಿಸಲು ಹಾಗೂ ಚುನಾವಣಾ ಮಾದರಿ ನೀತಿ ಸಂಹಿತೆಯನ್ನು ಕ್ರಿಯಾ ಯತ್ಮಕ ವಾಗಿ ಕಾರ್ಯ ನಿರ್ವ ಹಿಸಲು ಜಿಲ್ಲೆಯ ಎಲ್ಲಾ ಅಧಿಕಾರಿಗಳಿಗೆ ಕಟ್ಟುನಿಟ್ಟಾದ ಸೂಚನೆಗಳನ್ನು ನಿರ್ದೇಶಿಸ ಲಾಗಿ ದ್ದು ಸಾರ್ವಜನಕರು ಸಹ ಕಾರ ನೀಡು ವಂತೆ ಜಿಲ್ಲಾಧಿಕಾ ರಿಗಳು ತಿಳಿಸಿದರು.ಪತ್ರಿಕಾ ಗೋಷ್ಠಿಯಲ್ಲಿ ಜಿಲ್ಲಾ ಪಂಚಾಯತ ಸಿ.ಇ. ಓ. ರಾಹುಲ ಶಿಂಧೆ, ಆಯ್.ಜಿ. ಪಿ. ವಿಕಾಶ ಕುಮಾರ ವಿಕಾಶ,ಜಿಲ್ಲಾ ಪೋಲಿಸ್‌ವರಿಷ್ಠಾಧಿಕಾರಿ ಭೀಮಾ ಶಂಕರ ಗುಳೇದ, ಡಿ.ಸಿ.ಪಿ. ರೋಹನ ಜಗ ದೀಶ, ಪ್ರೊಬ ೇಷನರಿ ಆಯ.ಎ. ಎಸ್. ಅಧಿಕಾರಿ ಶುಭಂಶುಕ್ಲಾ ಉಪಸ್ಥಿತರಿದ್ದರು.

## ಲೋಕಸಭಾ ಚುನಾವಣೆ –2024 : ಗದಗ ಜಿಲ್ಲಾಡಳಿತ ಸಕಲ ಸಿದ್ಧತೆ

ಗದಗ,ಮಾರ್ಚ 16: ಲೋಕಸಭಾ ಸಾರ್ವತ್ರಿಕ ಚುನಾವಣೆಗೆ ಸಂಬಂದಿಸಿದಂತೆ ಜಿಲ್ಲೆಯಲ್ಲಿ ಮಾದರಿ ನೀತಿ ಸಂಹಿತೆ ಜಾರಿಯಾಗಿದೆ. ನ್ಯಾಯಸಮ್ಮತವಾಗಿ ಹಾಗೂ ನಿರ್ಭೀತವಾಗಿ ಚುನಾವಣೆ ನಡೆಸಲು ಜಿಲ್ಲಾಡಳಿತದಿಂದ ಸಕಲ ಸಿದ್ಧತೆಗಳನ್ನು ಮಾಡಲಾಗಿದೆ ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ತಿಳಿಸಿದರು.

ಗದಗ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶನಿವಾರ ಲೋಕಸಭಾ ಸಾರ್ವತ್ರಿಕ ಚುನಾವಣೆ ಕುರಿತು ಜರುಗಿದ ಪತ್ರಿಕಾಗೋಷ್ಟಿಯನ್ನುದ್ದೇಶಿಸಿ ಅವರು ಮಾತನಾಡಿದರು. ಗದಗ ಜಿಲ್ಲೆಯ ವ್ಯಾಪ್ತಿಯಲ್ಲಿ ನಾಲ್ಕು ವಿಧಾನಸಭಾ ಕ್ಷೇತ್ರಗಳಿದ್ದು, 65–ಶಿರಹಟ್ಟಿ, 66–ಗದಗ & 67–ರೋಣ ವಿಧಾನಸಭಾ ಕ್ಷೇತ್ರಗಳು 10–ಹಾವೇರಿ ಲೋಕಸಭಾ ಕ್ಷೇತ್ರದ ವ್ಯಾಪ್ತಿಗೆ ಒಳಪಡುತ್ತದೆ. ಇನ್ನುಳಿದ 68–ನರಗುಂದ ವಿಧಾನಸಭಾ ಕ್ಷೇತ್ರವು 3–ಬಾಗಲಕೋಟ ಲೋಕಸಭಾ ಕ್ಷೇತ್ರದ ವ್ಯಾಪ್ತಿಗೆ ಒಳಪಡುತ್ತದೆ ಎಂದರು.

10–ಹಾವೇರಿ ಲೋಕಸಭಾ ಕ್ಷೇತ್ರದ ವ್ಯಾಪ್ತಿಗೆ ಜಿಲ್ಲಾಧಿಕಾರಿಗಳು, ಹಾವೇರಿ ಹಾಗೂ 3–ಬಾಗಲಕೋಟ ಲೋಕಸಭಾ ಕ್ಷೇತ್ರದ ವ್ಯಾಪ್ತಿಗೆ ಜಿಲ್ಲಾಧಿಕಾರಿಗಳು, ಬಾಗಲಕೋಟ ಇವರು ಚುನಾವಣಾಧಿಕಾರಿಗಳಾಗಿ ಕಾರ್ಯನಿರ್ವಹಿಸುವರು. ಜಿಲ್ಲೆಯ ನಾಲ್ಕು ವಿಧಾನಸಭಾ ಕ್ಷೇತ್ರಗಳಿಗೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿಗಳು– 65 ಶಿರಹಟ್ಟಿ ; 66–ಗದಗ ಉಪವಿಭಾಗಾಧಿಕಾರಿಗಳು ಗದಗ –66; , ಡಿಯುಡಿಸಿ ಯೋಜನಾ ನಿರ್ದೇಶಕರು ರೋಣ–67 ಮತಕ್ಷೇತ್ರಕ್ಕೆ, ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯಾವಹಾರಗಳ ಇಲಾಖೆಯ ಉಪನಿರ್ದೇಶಕರು ನರಗುಂದ ಮತಕ್ಷೇತ್ರದ



ಸಹಾಯಕ ಚುನಾವಣಾಧಿಕಾರಿಗಳಾಗಿ ಕಾರ್ಯನಿರ್ವಹಿಸಲಿದ್ದಾರೆ.

ಪ್ರತಿ ಅಭ್ಯರ್ಥಿಗಳ ಖರ್ಚು ವೆಚ್ಚಗಳ ಬಗ್ಗೆ ನಿಗಾ ಇಡಲು ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ 02 ರಂತೆ ಒಟ್ಟು 08 ಲೆಕ್ಕ ತಂಡಗಳನ್ನು ಹಾಗೂ ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ಒಬ್ಬರಂತೆ ಒಟ್ಟು 04 ಸಹಾಯಕ ವೆಚ್ಚ ಅಧಿಕಾರಿಗಳಾಗಿ ನೇಮಕ ಮಾಡಲಾಗಿದೆ. ಭಾರತ ಚುನಾವಣಾ ಆಯೊಗದ ನಿರ್ದೇಶನಗಳಂತೆ ಸಾರ್ವಜನಿಕ ಹಾಗೂ ಖಾಸಗಿ ಆಸ್ಥಿಗೆ ಸಂಬಂಧಿಸಿದಂತೆ ಗೋಡೆ ಬರಹ, ಪೋಸ್ಟರ್ಸ್, ಬ್ಯಾನರ್‌ಗಳನ್ನು ಗುರುತಿಸಿ ಸದರಿ ಎಲ್ಲಾ ಪೋಸ್ಟರ್ / ಬ್ಯಾನರಗಳನ್ನು ತೆರವುಗೊಳಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ತಿಳಿಸಿದರು.

ಜಿಲ್ಲಾ ದೂರು ನಿರ್ವಹಣಾ ಕೇಂದ್ರ: ಜಿಲ್ಲೆಯಲ್ಲಿ ಯಾವುದೇ ರೀತಿ ದೂರುಗಳ ನಿರ್ವಹಣೆಗಾಗಿ ಸೈಯದ್ ಜೋಹೈಬುಲ್ಲಾ, ಜಿಲ್ಲಾ ವ್ಯವಸ್ಥಾಪಕರು, ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ, ಗದಗ (ಮೊ.ನಂ: 8277944217) ಇವರನ್ನು ನೋಡಲ್ ಅಧಿಕಾರಿಗಳೆಂದು ನೇಮಕ ಮಾಡಲಾಗಿದೆ. ಇವರ ಅಧೀನದಲ್ಲಿ Complaint Monitoring Team CVIGL ತಂಡ, 1950 (2 ನೇ ಪುಟಕ್ಕೆ)

## ಕೃತಕ ಬುದ್ಧಿಮತ್ತೆಯನ್ನು ಎಚ್ಚರಿಕೆಯಿಂದ ಬಳಸಿ:ನ್ಯಾ.ದೇವೇಂದ್ರ ಪಂಡಿತ್




ಕೊಪ್ಪಳ, ಮಾರ್ಚ್ 16 : ಗ್ರಾಹಕರು ಮೊಬೈಲ್‌ನಲ್ಲಿ ಆನ್‌ಲೈನ್ ಮುಖಾಂತರ ನಡೆಸುವ ಹಣಕಾಸಿನ ವ್ಯವಹಾರಕ್ಕಾಗಿ ಬಳಸುವ ಕೃತಕ ಬುದ್ಧಿಮತ್ತೆಯನ್ನು ಎಚ್ಚರಿಕೆಯಿಂದ ಬಳಸಬೇಕು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ದೇವೇಂದ್ರ ಪಂಡಿತ್ ಅವರು ಹೇಳಿದರು. ಶುಕ್ರವಾರದಂದು ಕೊಪ್ಪಳ ವಿಶ್ವವಿದ್ಯಾಲಯದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆಹಾರ ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ, ಕಾನೂನು ಮಾಪನ ಶಾಸ್ತ್ರ ಇಲಾಖೆ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಕೊಪ್ಪಳ ವಿಶ್ವವಿದ್ಯಾಲಯ, ವಾರ್ತಾ ಮತ್ತು ಸಾರ್ವಜನಕ ಸಂಪರ್ಕ ಇಲಾಖೆ, ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆ ಕೊಪ್ಪಳ ಇವರ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ವಿಶ್ವ ಗ್ರಾಹಕರ ದಿನಾಚರಣೆ–2024 ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಗ್ರಾಹಕರು ತಮ್ಮ ವೈಯಕ್ತಿಕ ಖಾತೆಯ ನಂಬರ್ ಅನ್ನು ಅಥವಾ ಖಾತೆಯ ವಿವರಗಳನ್ನು ಬಿಟ್ಟುಕೊಡಬಾರದು. ಮೊಬೈಲ್ ಮೂಲಕ ಆನ್‌ಲೈನ್ ಹಣ ವರ್ಗಾವಣೆ ಸಂದರ್ಭಗಳಲ್ಲಿ ಜಾಗ್ರತೆ ವಹಿಸಬೇಕು. ಗ್ರಾಹಕರು ಕೊಂಡ ವಸ್ತುಗಳು ಕಳಪೆ ಗುಣಮಟ್ಟದ್ದಾಗಿದ್ದಲ್ಲಿ, ಅದರಿಂದ ಮೋಸ ಹೋದಲ್ಲಿ ಅಥವಾ ವೆಹಿಕಲ್ ಇನ್ಸೂರೆನ್ಸ್ ಕಂಪನಿಯಿಂದ ಯಾವ ರೀತಿ ಪರಿಹಾರ ಪಡೆಯಬೇಕು ಎಂಬುದಕ್ಕೆ ಸೂಕ್ತವಾದ ಕಾನೂನಾತ್ಮಕ ಉತ್ತರಗಳನ್ನು ನೀಡುತ್ತಾ ಕೃತಕ ಬುದ್ದಿ ಮತ್ತೆ ಬಳಸಿ ನಡೆಸುವ ವ್ಯವಹಾರಗಳ ಬಗ್ಗೆ ಎಚ್ಚರಿಕೆ ವಹಿಸುವಂತೆ ತಿಳಿಸಿದರು.

ವಿಶೇಷ ಉಪನ್ಯಾಸ ನೀಡಿ ಮಾತನಾಡಿದ ನ್ಯಾಯವಾದಿ ಮತ್ತು ಮುಜುಮದಾರ ಫೌಂಡೇಶನ್‌ನ ಅಧ್ಯಕ್ಷರಾದ ಸಾವಿತ್ರಿ ಮುಜುಮದಾರ ಅವರು, ಎ.ಐ ಅಥವಾ ಕೃತಕ ಬುದ್ಧಿಮತ್ತೆಯು ಕೆಲವು ಸಮಯದಲ್ಲಿ ಸರಿಯಾಗಿ ಕಾರ್ಯನಿರ್ವಹಿಸುವುದಿಲ್ಲ. ಅವುಗಳಿಂದ ಅನುಕೂಲಗಳಿಗಿಂತ ಅನಾನುಕೂಲಗಳೇ ಹೆಚ್ಚಾಗಿವೆ. (2 ನೇ ಪುಟಕ್ಕೆ)

## ಕರ್ನಾಟಕ ರಾಜ್ಯ ಮಹಿಳಾ ಆಯೋಗ: ಜಿಲ್ಲಾ ಮಟ್ಟದ ಸಭೆ

# ದೌರ್ಜನ್ಯ ಪ್ರಕರಣಗಳನ್ನು ತಡೆಗಟ್ಟಲು ವ್ಯಾಪಕ ಪ್ರಚಾರ ಕೈಗೊಳ್ಳಬೇಕು: ಡಾ.ನಾಗಲಕ್ಷ್ಮೀ ಚೌಧರಿ

ಬೆಳಗಾವಿ,ಮಾ.16 : ಹೆಣ್ಣು ಮಕ್ಕಳ ಮೇಲಿನ ದೌರ್ಜನ್ಯ ಪ್ರಕರಣಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಸಾರ್ವಜನಕ ಪ್ರದೇಶಗಳಲ್ಲಿ ಸಹಾಯವಾಣಿ ಸಂಖ್ಯೆ ಪೋಸ್ಟರ್, ಜಾಗೃತಿ ಕಾರ್ಯಕ್ರಮಗಳ ಮೂಲಕ ವ್ಯಾಪಕ ಪ್ರಚಾರ ಕೈಗೊಳ್ಳಬೇಕು ಎಂದು ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ.ನಾಗಲಕ್ಷ್ಮೀ ಚೌಧರಿ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಧಿಕಾರಿ ಕಚೇರಿಯ ಸಭಾಂಗಣದಲ್ಲಿ ಶನಿವಾರ (ಮಾ.16) ನಡೆದ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಹೆಣ್ಣು ಮಕ್ಕಳ ಮೇಲಿನ ದೌರ್ಜನ್ಯ ಪ್ರಕರಣಗಳು ಮರುಕಳಿಸದಂತೆ ನೋಡಿಕೊಳ್ಳಬೇಕು. 2023–24 ನೇ ಸಾಲಿನಲ್ಲಿ ಸವದತ್ತಿ, ಬೈಲಹೊಂಗಲ ತಾಲೂಕಿನಲ್ಲಿರುವ ಬಾಲ್ಯ ವಿವಾಹ ಪ್ರಕರಣಗಳು ಹೆಚ್ಚಾಗಿ ಕಂಡು ಬಂದಿವೆ. ಇವುಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಪ್ರತಿ 3 ತಿಂಗಳಿಗೊಂದು ತಾಲೂಕಾ ಮಟ್ಟದ ಸಭೆ ಕರೆದು ಜಾಗೃತಿಗಳನ್ನು ಮೂಡಿಸಬೇಕು ಎಂದು ಹೇಳಿದರು.

ಸವದತ್ತಿ, ಗೋಕಾಕ್, ರಾಮದುರ್ಗ ತಾಲೂಕಿನ ಅತೀ ಹೆಚ್ಚು ಬಾಲ್ಯವಿವಾಹ ಪ್ರಕರಣಗಳು ಕಂಡು ಬಂದಿವೆ ಹಾಗಾಗಿ ಹೆಚ್ಚಿನ ಜಾಗೃತಿ ಕಾರ್ಯಕ್ರಮಗಳು ಆಯೋಜನೆ ಮಾಡಬೇಕು ಮತ್ತು ಅದಕ್ಕೆ ಪೂರಕವಾದ ದಾಖಲೆಗಳನ್ನು ಸಂಗ್ರಹಿಸಬೇಕು ಎಂದು ತಿಳಿಸಿದರು.

ಪ್ರತಿ ಅಂಗನವಾಡಿ ಕೇಂದ್ರ, ಶಾಲಾ ಕಾಲೇಜುಗಳಲ್ಲಿ ಬಾಲ್ಯ ವಿವಾಹ ದುಷ್ಪರಿಣಾಮ ಕುರಿತು ಜಾಗೃತಿ ಮೂಡಿಸಬೇಕು. ಸಖಿ ಒನ್



ಸ್ಟಾಪ್ 1098 ಸಹಾಯವಾಣಿ ಸಂಪರ್ಕ 24*7 ನಿರಂತರ ಚಾಲನೆಯಲ್ಲಿರಬೇಕು. ಸಖಿ ಸಹಾಯ ವಾಣಿ ಕೇಂದ್ರಗಳ ಸಿಬ್ಬಂದಿಗಳಿಗೆ ಕಳೆದ 6 ತಿಂಗಳಿಗೆ ವೇತನ ಪಾವತಿಸುವ ತೊಂದರೆ ಯಾಗುತ್ತಿದೆ. ಕೂಡಲೇ ಇದನ್ನು ಸಂಬಂಧಿಸಿದ ಸಚಿವರ ಗಮನಕ್ಕೆ ತಂದು ವೇತನ ಪಾವತಿಗೆ ಕ್ರಮ ವಹಿಸಲಾಗುವುದು ಎಂದರು. ಉಜ್ವಲ ಮಹಿಳಾ ಸಂರಕ್ಷಣೆ ಕೇಂದ್ರಗಳಲ್ಲಿ ಇತರೆ ರಾಜ್ಯಗಳಿಂದ ಬಂದಂತಹ ಮಹಿಳೆಯರನ್ನು ರಕ್ಷಣೆ ಮಾಡಿ ಅವರಿಗೆ ಆಶ್ರಯ ನೀಡಲಾಗುತ್ತಿದೆ. ಹಣದ ಆಮಿಷದಿಂದ ಗಡಿ ಭಾಗದಲ್ಲಿನ ಹೆಚ್ಚಿನ ಮಹಿಳೆಯರು ಕಾಣೆಯಾಗಿರುವುದು ಕಂಡು ಬರುತ್ತದೆ. ಇದರ ಬಗ್ಗೆ ಜಿಲ್ಲಾಡಳಿತ ವರದಿ ಕೊಡಬೇಕು.

ಜಿಲ್ಲಾಡಳಿತ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಜಾಗೃತಿ ಕಾರ್ಯಕ್ರಮಗಳು ಆಗಿರುವ ಕುರಿತು ದಾಖಲೆಗಳನ್ನು ನೀಡಬೇಕು ಎಂದು ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ.ನಾಗಲಕ್ಷ್ಮೀ ಚೌಧರಿ ಅವರು ತಿಳಿಸಿದರು.ಜಿಲ್ಲೆಯ ಗ್ರಾಮ ಪಂಚಾಯತಿ ಮಟ್ಟದಲ್ಲಿ ಮಹಿಳೆ ಮತ್ತು ಮಕ್ಕಳ ರಕ್ಷಣೆಗಾಗಿ ಕಾವಲು ಸಮಿತಿಗಳನ್ನು ರಚಿಸಲಾಗಿದೆ. ಮಹಿಳೆಯರ ದೌರ್ಜನ್ಯ, ಬಾಲ್ಯವಿವಾಹ, ಪೋಕ್ಸೋ ಪ್ರಕರಣಗಳನ್ನು ತಡೆಗಟ್ಟಲು ಕಟ್ಟುನಿಟ್ಟಾಗಿ ಕ್ರಮಗಳನ್ನು ತೆಗೆದುಕೊಳ್ಳಲಾಗುತ್ತಿದೆ. ಪ್ರತಿಯೊಂದು ಗ್ರಾಮ ಪಂಚಾಯಿತಿಗಳಲ್ಲಿ ಪ್ರತಿ ಮೂರು ತಿಂಗಳಿಗೊಮ್ಮೆ ಸಭೆ ನಡೆಸಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ತಿಳಿಸಿದರು.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ಜಿಲ್ಲೆಯಲ್ಲಿರುವ ವಸತಿ ನಿಲಯಗಳಲ್ಲಿ ಮಕ್ಕಳಿಗೆ ಜಾಗೃತಿ ಕಾರ್ಯಕ್ರಮಗಳ ಜೊತೆಗೆ ರಕ್ಷಣಾತ್ಮಕ ತರಬೇತಿ ಕಾರ್ಯಕ್ರಮಗಳನ್ನು ಆಯೋಜನೆ ಮಾಡಲಾಗುತ್ತಿದೆ.

ರೈಲ್ವೆ ಸ್ಟೇಷನ್, ಬಸ್ ನಿಲ್ದಾಣ, ಗಡಿ ಪ್ರದೇಶದಲ್ಲಿ, ಜನ ಹೆಚ್ಚಾಗಿ ಇರುವ ಪ್ರದೇಶಗಳಲ್ಲಿ ಕೂಡ ಜಾಗೃತಿ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ ಎಂದು ಎಸ್.ಪಿ ಭೀಮಾಶಂಕರ ಗುಳೇದ ಅವರು ತಿಳಿಸಿದರು.ಕೌಟುಂಬಿಕ ದೌರ್ಜನ್ಯಕ್ಕೆ ಒಳಗಾದ ಮಹಿಳೆಯರನ್ನು ಜಿಲ್ಲೆಯ ಮೂರು ಸೇವಾ ಕೇಂದ್ರಗಳಲ್ಲಿ ಆಶ್ರಯ ನೀಡಲಾಗುತ್ತಿದೆ. ಮೂರು ಸಂಸ್ಥೆಗಳ ನಿರ್ವಹಣೆಗೆ ಸರ್ಕಾರದಿಂದ ಅನುದಾನ ಒದಗಿಸಲಾಗುತ್ತಿದೆ ಎಂದು ಸಂಬಂಧಿಸಿದ ಅಧಿಕಾರಿಗಳು ತಿಳಿಸಿದರು.

ಜಿಲ್ಲೆಯಲ್ಲಿರುವ ಸಾಂತ್ವನ ಕೇಂದ್ರಗಳಿಗೆ ಪ್ರತಿ ಮೂರು ತಿಂಗಳಿಗೊಮ್ಮೆ ಅನುದಾನ ನೀಡಲಾಗುತ್ತಿದೆ. ವಿವಿಧ ಇಲಾಖೆಯ ಸಹಯಗದೊಂದಿಗೆ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜನೆ ಮಾಡಲಾಗುತ್ತಿದೆ ಎಂದು ಸಾಂತ್ವಾನ ಕೇಂದ್ರದ ಸಮಾಲೋಚಕಿ ಲಲಿತಾ ಅವರು ಹೇಳಿದರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಕಾಧಿಕಾರಿ ರಾಹುಲ್ ಶಿಂಧೆ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಶೃತಿ, ಎಸಿಪಿ ಸದಾಶಿವ ಕಟ್ಟಿಮನಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕ ಆರ್ ನಾಗರಾಜ, ವಿವಿಧ ಸಾಂತ್ವಾನ ಕೇಂದ್ರದ ಸಂಯೋಜಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅಧಿಕಾರಿ ಸಿಬ್ಬಂದಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.